## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕೋವಿಡ್-19ರ ಹಿನ್ನೆಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಶುಶ್ರೂಷಕರು, ಲ್ಯಾಬ್ ಟೆಕ್ನೀಷಿಯನ್, ಫಾರ್ಮಾಸಿಸ್ಟ್ ಮತ್ತು ಗ್ರೂಪ್-ಡಿ ಹುದ್ದೆಗಳನ್ನು ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುವ ಬಗ್ಗೆ.

******

ಪ್ರಸ್ತಾವನೆ:

ರಾಜ್ಯಾದ್ಯಂತ ಕೊರೋನಾ ವೈರಸ್ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಅರೆ ವೈದ್ಯಕೀಯ ಸಿಬ್ಬಂದಿಗಳ ಪಾತ್ರ ಮಹತ್ವದ್ದಾಗಿರುತ್ತದೆ. ಆದರೆ, ಪ್ರಸ್ತುತ ಇಲಾಖೆಯಲ್ಲಿ ಶುಶ್ರೂಷಕರು-1419, ಲ್ಯಾಬ್ ಟೆಕ್ನೀಷಿಯನ್-506, ಫಾರ್ಮಾಸಿಸ್ಟ್-916 ಹಾಗೂ ಗ್ರೂಪ್-ಡಿ ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳನ್ನು ಭರ್ತಿ ಮಾಡುವುದು ಅವಶ್ಯಕತೆ ಇರುತ್ತದೆ.

ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕ ರೋಗ ನಿರ್ವಹಣೆಗಾಗಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ತಾತ್ಕಾಲಿಕವಾಗಿ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವುದು ಅತ್ಯವಶ್ಯಕವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸಮರ್ಪಕ ವೈದ್ಯಕೀಯ ಸೇವೆಯನ್ನು ಒದಗಿಸಲು ಅನುಕೂಲವಾಗುವಂತೆ ಇಲಾಖೆಯಲ್ಲಿ ಖಾಲಿ ಇರುವ ಅರೆ ವೈದ್ಯಕೀಯ ಹುದ್ದೆಗಳಾದ ಶುಶ್ರೂಷಕರು, ಪ್ರಯೋಗಶಾಲಾ ತಂತ್ರಜ್ಞರು, ಫಾರ್ಮಾಸಿಸ್ಟ್ ಮತ್ತು ಗ್ರೂಪ್-ಡಿ ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ತಾತ್ಕಾಲಿಕವಾಗಿ 06 ತಿಂಗಳ ಮಟ್ಟಿಗೆ ಅಥವಾ ನೇರ ನೇಮಕಾತಿ ಮುಖೇನ ಹುದ್ದೆಗಳು ಭರ್ತಿಯಾಗುವವರೆಗೆ ಇವುಗಳಲ್ಲಿ ಯಾವುದು ಮೊದಲು ಅಲ್ಲಿಯವರೆಗೆ ಗುತ್ತಿಗೆ/ಹೊರ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ. ಅದರಂತೆ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಆಕುಕ 01 ಸಿ&ಆರ್ 2020**

**ಬೆಂಗಳೂರು, ದಿನಾಂಕ: 14-07-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ವ್ಯಾಪಕವಾಗಿ ಹೆಚ್ಚಾಗುತ್ತಿರುವ ಕೊರೋನಾ ವೈರಸ್ ಪ್ರಕರಣಗಳನ್ನು ಸಮರ್ಪಕವಾಗಿ ನಿಭಾಯಿಸಲು ಅನುಕೂಲವಾಗುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಪ್ರಸ್ತುತ ಖಾಲಿ ಇರುವ ಈ ಕೆಳಕಂಡ ವೃಂದದ ಎಲ್ಲಾ ಹುದ್ದೆಗಳನ್ನು ತಾತ್ಕಾಲಿಕವಾಗಿ 06 ತಿಂಗಳ ಮಟ್ಟಿಗೆ ಅಥವಾ ನೇರ ನೇಮಕಾತಿ ಹುದ್ದೆಗಳು ಭರ್ತಿಯಾಗುವವರೆಗೆ ಇವುಗಳಲ್ಲಿ ಯಾವುದು ಮೊದಲು ಅಲ್ಲಿಯವರೆಗೆ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ತ್ವರಿತವಾಗಿ ಭರ್ತಿ ಮಾಡಿಕೊಳ್ಳಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಿ ಆದೇಶಿಸಿದೆ.

| ಕ್ರ ಸಂ. | ಹುದ್ದೆಗಳ ವಿವರ | ಮಾಸಿಕ ವೇತನ | ನೇಮಕಾತಿ ವಿಧಾನ |
|---|---|---|---|
| 1 | ಶುಶ್ರೂಷಕರು | ರೂ.25,000/- | ಗುತ್ತಿಗೆ ಆಧಾರದ ಮೇಲೆ |
| 2 | ಪ್ರಯೋಗಶಾಲಾ ತಂತ್ರಜ್ಞರು | ರೂ.20,000/- | |
| 3 | ಫಾರ್ಮಾಸಿಸ್ಟ್ | ರೂ.20,000/- | |
| 4 | ಗ್ರೂಪ್-ಡಿ | ಚಾಲ್ತಿಯಿರುವ ವೇತನ (Existing Wages) ಆಧಾರದ ಮೇಲೆ. | ಹೊರಗುತ್ತಿಗೆ ಆಧಾರದ ಮೇಲೆ |

ಈ ಆದೇಶವನ್ನು ಆರ್ಥಿಕ ಇಲಾಖೆಯು ದಿನಾಂಕ:14/07/2020 ರಂದು ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಯ. ಶಿವಶಂಕರ್) 14/7/2020
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಸೇವೆಗಳು)

ಇವರಿಗೆ:

1) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
2) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
3) ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)
4) ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)
5) ರಾಜ್ಯದ ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು/ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)
6) ಮುಖ್ಯ ಆಡಳಿತಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
7) ಮುಖ್ಯ ಲೆಕ್ಕಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿಯನ್ನು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಆ.ಕು.ಕ. ಇಲಾಖೆ, ವಿಕಾಸ ಸೌಧ., ಬೆಂಗಳೂರು
2) ಸರ್ಕಾರದ ಜಂಟಿ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕು.ಕ. ಇಲಾಖೆ, ವಿಕಾಸ ಸೌಧ, ಬೆಂಗಳೂರು.